# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 283 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 01–06–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 283 | Title- Code: KARKAN 28269 | Chitradurga | Date: 01-06-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**
ಲೋಕಸಭಾ ಚುನಾವಣೆ ; ಜೂ.4ರ ಮತ ಎಣಿಕೆಗೆ ಸಕಲ ಸಿದ್ಧತೆ : ಡಿಸಿ ವೆಂಕಟೇಶ್ 2
ಹದಿಹರೆಯದವರಲ್ಲಿ ತಂಬಾಕಿನ ದುಷ್ಪರಿಣಾಮ ಕುರಿತು ಜಾಗೃತಿ ಅಗತ್ಯ 3
ತಂಬಾಕು ಸೇವನೆ ಇಲ್ಲವಾಗಿಸುವುದು ಇಂದಿನ ಅತ್ಯಗತ್ಯ: ರಾಜೇಶ್ವರಿ ಎನ್ ಹೆಗಡೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಮಾಜಿ ಸಚಿವ ಗೋವಿಂದ ಕಾರಜೋಳ ಆರೋಪ

# ಕಾಂಗ್ರೆಸ್ಸಿಂದ ಸರ್ಕಾರದ ಖಜಾನೆ ಲೂಟಿ

» ಚಿತ್ರದುರ್ಗ

ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಸರ್ಕಾರದ ಖಜಾನೆ ನಿರಂತರವಾಗಿ ಲೂಟಿಯಾಗುತ್ತಿದೆ. ವಾಲ್ಮೀಕಿ ನಿಗಮ ಹಗರಣ ಸರ್ಕಾರದ ಖಜಾನೆಯ ಹಗಲು ದರೋಡೆಯಾಗಿದೆ. ಇದು ಭ್ರಷ್ಟಾಚಾರ ಅಲ್ಲ ಹಗಲು ದರೋಡೆಯಾಗಿದೆ ಎಂದು ಮಾಜಿ ಸಚಿವ ಗೋವಿಂದ ಕಾರಜೋಳ ಆರೋಪಿಸಿದ್ದಾರೆ.

ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನಲೆಯಲ್ಲಿ ನಗರದ ಸಂತ ಜೋಸೆಫ್ ಕಾನ್ವೆಂಟ್‌ನಲ್ಲಿ ಮತಯಾಚನೆ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಚುನಾವಣೆಯ ಹಿನ್ನಲೆಯಲ್ಲಿ ಹೈದರಾಬಾದ್ ಮತ್ತು ತೆಲಂಗಾಣಕ್ಕೆ ಹಣ ಹೋಗಿದೆ. ಮುಖ್ಯಮಂತ್ರಿಗಳು ಇದುವರೆವಿಗೂ ಯಾವುದೇ ಹೇಳಿಕೆಯನ್ನು ನೀಡಿಲ್ಲ, ಹಣಕಾಸು ಇಲಾಖೆಯನ್ನು ನೋಡುತ್ತಿರುವವರ ಮುಖ್ಯಮಂತ್ರಿಗಳಾಗಿದ್ದಾರೆ. ಈ ವೇಳೆಗೆ ಸಚಿವ ನಾಗೇಂದ್ರ ರವರ ರಾಜೀನಾಮೆಯನ್ನು ಪಡೆಯಬೇಕಿತ್ತು. ಈ ಪ್ರಕರಣವನ್ನು ನಿಸ್ಪಕ್ಷಪತವಾದ ತನಿಖೆಗೆ ಆದೇಶವನ್ನು ಮಾಡಬೇಕಿತ್ತು, ಅದನ್ನು ಮಾಡಿಲ್ಲ ಬಂಡತನದಿಂದ ಅವರನ್ನು ಉಳಿಸಿಕೊಳ್ಳುವ ಪ್ರಯತ್ನವನ್ನು ಮುಖ್ಯಮಂತ್ರಿಗಳು ಮತ್ತು ಸಚಿವ ಸಂಪುಟದ ಸದಸ್ಯರು ಮಾಡುತ್ತಿದ್ದಾರೆ. ಇದು ಖಂಡನೀಯ ಎಂದು ತಿಳಿಸಿದರು.



ಗುತ್ತಿಗೆದಾರರಲ್ಲದ ವ್ಯಕ್ತಿಯೋರ್ವ ಈಶ್ವರಪ್ಪರವರ ಮೇಲೆ ವಿನಾಕಾರಣ ಆರೋಪವನ್ನು ಮಾಡಿದ ಇದನ್ನು ಖಂಡಿಸಿದ ಸಿದ್ದರಾಮ್ಯಯ ಆವರನ್ನು ಬಂಧಿಸಿ ಜೈಲಿಗೆ ಕಳುಹಿಸಬೇಕೆಂದು ಒತ್ತಾಯ ಮಾಡಿದ್ದರು ಆದರೆ ಇದು ನಮ್ಮದೆ ಸರ್ಕಾರದಲ್ಲಿ ತಮ್ಮದೆ ಸಚಿವ ಸಂಪುಟದಲ್ಲಿ ಇರುವ ವ್ಯಕ್ತಿಯ ಮೇಲೆ ಆರೋಪ ಬಂದಿದೆ ಆದರೆ ಅವರನ್ನು ಇನ್ನೂ ಸಹಾ ತಮ್ಮ ಜೊತೆಯಲ್ಲಿಯೇ ಇಟುಕೊಂಡಿದ್ದಾರೆ ಇದು ದುರಂತ ಎಂದ ಅವರು, ನೇರವಾಗಿ ಸರ್ಕಾರದ ಖಜಾನೆಯಿಂದಲೇ ಹಣ ಹೋಗಿದೆ. ಸಿಎಂರವರಿಗೆ ನೈತಿಕತೆ ಇಲ್ಲವಾಗಿದೆ ಎಂದರು.

ಸಚಿವ ನಾಗೇಂದ್ರರವರನ್ನು ಸಚಿವ ಸಂಪುಟದಿಂದ ಕೈ ಬಿಡಬೇಕು, ಸಿಬಿಐ ಯಿಂದ ತನಿಖೆಯನ್ನು ಮಾಡಿಸಬೇಕು, ಇದು ಭಂಡತನದ ಸರ್ಕಾರವಾಗಿದೆ. ಅಧಿಕಾರದಲ್ಲಿ ಮುಂದುವರೆಯುತ್ತಿದ್ದಾರೆ ಇಡಿ ಸಂಪುಟವೇ ರಾಜೀನಾಮೆಯನ್ನು ನೀಡಬೇಕಿದೆ. ಮುಖ್ಯಂತ್ರಿಗಳೇ ನೈತಿಕ ಹೊಣೆಯನ್ನು ಹೊತ್ತು ರಾಜೀನಾಮೆಯನ್ನು ನೀಡಬೇಕಿತ್ತು ಏಕೆಂದರೆ ಹಣಕಾಸಿನ ಇಲಾಖೆ ಅವರ ಬಳಿ ಇದೆ ಖಜಾನೆಯಿಂದ 44 ಕೋಟಿ ವರ್ಗಾವಣೆಯಾಗಿದೆ.ರಾಜೀನಾಮೆಯನ್ನು ನೀಡಿ ನಿಸ್ಪಕ್ಷಪಾತವಾದ ತನಿಖೆಗೆ ಸಿಬಿಐಗೆ ಆದೇಶವನ್ನು ಮಾಡಬೇಕಿದೆ ಎಂದ ಅವರು ಪ್ರಜ್ವಲ್ ರೇವಣ ಪ್ರಕರಣದಲ್ಲಿ ನಿಸ್ಪಕ್ಷಪಾತವಾದ ತನಿಖೆಯಾಗಬೇಕು, ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕಿದೆ. ನಾನು ಬಸವ ತತ್ವದಲ್ಲಿ ನಂಬಿಕೆ ಇರುವವನು ನಾನು ಮೂಢನಂಬಿಕೆ ಗೂಡ್ಡ ಕಂದಾಚಾರಗಳಿಗೆ ಯಾವೂತ್ತು ಸಹಾ ಬೆಲೆ ಕೊಟ್ಟಿಲ್ಲ, ಕೂಡುವುದಿಲ್ಲ ಇದರ ಬಗ್ಗೆ ನನ್ನ ಪ್ರತಿಕ್ರಿಯೇ ಕೇಳುವುದು ಅನಾವಶ್ಯಕ ಎಂದು ತಿಳಿಸಿದರು.

ನಾರಾಯಣಸ್ವಾಮಿಯವರು ಸಹಾ ಶಿಕ್ಷಕ ಹಲವಾರು ಸಮಸ್ಯೆಗಳ ಬಗ್ಗೆ ಸದನದ ಒಳಗೂ ಹಾಗೂ ಹೊರಗು ಸಹಾ ಹೋರಾಟವನ್ನು ಮಾಡುವುದರ ಮೂಲಕ ಅವರ ಸಮಸ್ಯೆಗಳಿಗೆ ಸ್ಪಂದಿಸಿದ್ದಾರೆ, ಇನ್ನೂ ಮುಂದೆಯೂ ಸಹಾ ಸ್ಪಂಧಿಸಲಿದ್ದಾರೆ ಎಂದು ತಿಳಿಸಿದ ಅವರು, ಕಳೆದ ಮೂರು ಬಾರಿ ಬಿಜೆಪಿ ಅಭ್ಯರ್ಥಿಯಾಗಿದ್ದ ಅವರು ಈ ಬಾರಿ ನಾನು ಬಿಜೆಪಿ ಜೆಡಿಎಸ್‌ನ ಮೈತ್ರಿ ಕೂಟದ ಅಭ್ಯರ್ಥಿಯಾಗಿದ್ದಾರೆ ಈ ಹಿನ್ನಲೆಯಲ್ಲಿ ನಮ್ಮ ಬಲ ಹೆಚ್ಚಾಗಿದೆ. ಅಲ್ಲದೆ ಅವರ ಪರವಾದ ಒಲವು ಹೆಚ್ಚಾಗಿದೆ ಎಂದರು.

ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ, ಶಂಭು ಮಹಾರಾಜ್, ನಗರಸಭಾ ಸದಸ್ಯರಾದ ಹರೀಶ್ ಕೃಷ್ಣಮೂರ್ತಿ, ನವೀನ ಚಾಲುಕ್ಯ, ಪರಶುರಾಮ್, ಶೀಲ, ಬಿಜೆಪಿ ವಕ್ತಾರರಾದ ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್, ಮಂಜುಳಮ್ಮ, ಶಾಂತಮ್ಮ, ಕಾಂಚನ, ಅರುಣ್ ರವಿಕುಮಾರ್,ಶಂಭು, ಶೈಲಜಾ ರೆಡ್ಡಿ, ಬಸಮ್ಮ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವ್ಯಕ್ತಿಗಳು ಕಾಣೆ ಪತ್ತೆಗೆ ಮನವಿ

» ಚಿತ್ರದುರ್ಗ

ಮೂವರು ವ್ಯಕ್ತಿಗಳು ಕಾಣೆಯಾದ ಕುರಿತು ಭರಮಸಾಗರ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಇಸಾಮುದ್ರ ಗ್ರಾಮದ ಸಂತೋಷ್ ತಂದೆ ಪಾಂಡುನಾಯ್ಕ (ಸು.38ವರ್ಷ) ಕಾಣೆಯಾದ ಕುರಿತು 2022 ನವೆಂಬರ್ 25 ರಂದು ಪ್ರಕರಣ ದಾಖಲಾಗಿದೆ. ಸಂತೋಷ್ 5.2 ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಗುಲಾಬಿ ಬಣ್ಣದ ತುಂಬು ತೋಳಿನ ಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಭರಮಸಾಗರ ಗೊಲ್ಲರಹಟ್ಟಿ ಗ್ರಾಮದ ಅನುಸೂಯಮ್ಮ ಗಂಡ ಲೇಟ್ ಬಿ.ಎನ್.ತಿಪ್ಪೇಸ್ವಾಮಿ (ಸು.52 ವರ್ಷ) ಕಾಣೆಯಾದ ಕುರಿತು 2023 ಆಗಸ್ಟ್ 12 ರಂದು ಪ್ರಕರಣ ದಾಖಲಾಗಿದೆ. ಅನುಸೂಯಮ್ಮ 4.8 ಅಡಿ ಎತ್ತರ, ಕೋಲು ಮುಖ ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಹಸಿರು ಬಣ್ಣದ ಸೀರೆ ಮತ್ತು ಹಳದಿ ಬಣ್ಣದ ರವಿಕೆ ಧರಿಸಿರುತ್ತಾರೆ. ಕ್ಯಾಸಪುರ ಗ್ರಾಮದ ಸವಿತಾ ಗಂಡ ಲೇ.ವಾಸು (ಸು.32ವರ್ಷ) ಕಾಣೆಯಾದ ಕುರಿತು 2023 ಡಿಸೆಂಬರ್ 19 ರಂದು ಪ್ರಕರಣ ದಾಖಲಾಗಿದೆ. ಸವಿತಾ 4.5 ಅಡಿ ಎತ್ತರ, ಕೋಲು ಮುಖ, ಗೋಧಿ ಬಣ್ಣ ಸಾಧಾರಣ ಮೈಕಟ್ಟು ಹೊಂದಿದ್ದು ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಹಸಿರು ಬಣ್ಣದ ಸೀರೆ ಮತ್ತು ಜಾಕೆಟ್ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಗಳ ಕುರಿತು ಮಾಹಿತಿ ತಿಳಿದು ಬಂದಲ್ಲಿ ಭರಮಸಾಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08194–258421, 9480803163, ಚಿತ್ರದುರ್ಗ ಕಂಟ್ರೋಲ್ ರೂಂ ಸಂಖ್ಯೆ 089194–222782, 08194–10 ಗೆ ಸಂಪರ್ಕಿಸಬಹುದು ಎಂದು ಠಾಣಾಧಿಕಾರಿ ತಿಳಿಸಿದ್ದಾರೆ.

### ಪರಿಷತ್ ಚುನಾವಣೆ; ಜೂ. 3 ರಂದು ಮತದಾನ

» ದಾವಣಗೆರೆ

ರಾಜ್ಯದ ವಿಧಾನ ಪರಿಷತ್‌ನ 6 ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಜಿಲ್ಲೆಯಲ್ಲಿ ಆಗ್ನೇಯ ಶಿಕ್ಷಕರ, ನೈರುತ್ಯ ಶಿಕ್ಷಕರ ಕ್ಷೇತ್ರ ಮತ್ತು ನೈರುತ್ಯ ಪದವೀಧರರ ಕ್ಷೇತ್ರಕ್ಕೆ ಚುನಾವಣೆ ನಡೆಯುತ್ತಿದ್ದು ಜೂನ್ 3 ರಂದು ಬೆಳಗ್ಗೆ 8 ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಆಗ್ನೇಯ ಶಿಕ್ಷಕರ ಕ್ಷೇತ್ರದ ಕಣದಲ್ಲಿರುವ ಅಭ್ಯರ್ಥಿಗಳ ವಿವರ; ಡಾ.ವೈ.ಎ ನಾರಾಯಣಸ್ವಾಮಿ, ಭಾರತೀಯ ಜನತಾ ಪಾರ್ಟಿ, ಡಿ.ಟಿ.ಶ್ರೀನಿವಾಸ್, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್, ಕಿಶೆನ್.ಎಂ.ಜಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷೇತರರಾಗಿ ಡಾ.ಜಿ.ಹೆಚ್. ಇಮ್ರಾಪೂರ, ಕಪನಿಗೌಡ, ಎನ್.ಈ ನಟರಾಜ, ವೈ.ಆರ್.ನಾರಾಯಣಸ್ವಾಮಿ, ವೈ.ಎಂ.ನಾರಾಯಣಸ್ವಾಮಿ, ವೈ.ಸಿ.ನಾರಾಯಣಸ್ವಾಮಿ, ಬಾಬು ಯೋಗೀಶ್.ಆರ್, ಲೋಕೇಶ್ ತಾಳಿಕಟ್ಟೆ, ವನಿತಾ.ವಿನೋದ್ ಶಿವರಾಜ್, ಶ್ರೀನಿವಾಸ.ಬಿ, ಸೈಯದ್ ಆಫಾಖ್ ಅಹಮದ್ ಚುನಾವಣಾ ಕಣದಲ್ಲಿದ್ದಾರೆ.

**ನೈರುತ್ಯ ಶಿಕ್ಷಕರ ಕ್ಷೇತ್ರ;** .ಎಸ್.ಎಲ್.ಭೋಜೆಗೌಡ, ಜನತಾದಳ, ಡಾ.ಕೆ.ಕೆ ಮಂಜುನಾಥ್ ಕುಮಾರ್, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್, ಪಕ್ಷೇತರರಾಗಿ ಡಾ.ಅರುಣ್ ಹೊಸಕೊಪ್ಪ, ಡಾ.ನರೇಶ್ಚಂದ್ ಹೆಗ್ಡೆ, ನಂಜೇಶ್ ಬೆಣ್ಣೂರು, ಭಾಸ್ಕರಶೆಟ್ಟಿಟಿ, ಕೆ.ಕೆ. ಮಂಜುನಾಥ್ ಕುಮಾರ್, ಪಕ್ಷೇತರ, ಡಾ.ಎಸ್. ಆರ್.ಹರೀಶ್ ಆಚಾರ್ಯ ಚುನಾವಣಾ ಕಣದಲ್ಲಿದ್ದಾರೆ.

**ನೈರುತ್ಯ ಪದವೀಧರರ ಕ್ಷೇತ್ರ;** ಆಯನೂರು ಮಂಜುನಾಥ, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್, ಡಾ.ಧನಂಜಯ ಸರ್ಜಿ, ಭಾರತೀಯ ಜನತಾ ಪಾರ್ಟಿ, ಜಿ.ಸಿ.ಪಾಟೀಲ್, ಸರ್ವ ಜನತಾ ಪಾರ್ಟಿ, ಪಕ್ಷೇತರರಾಗಿ ದಿನಕರ ಉಳ್ಳಾಲ್, ಎಸ್.ಪಿ.ದಿನೇಶ್, ಬಿ.ಮಹಮ್ಮದ್ ತುಂಬೆ, ಕೆ.ರಘುಪತಿ ಭಟ್, ಡಾ.ಶೇಕ್ ಬಾವ ಕಣದಲ್ಲಿದ್ದಾರೆ.

# ಹೂ ನೀಡಿ ಸಿಹಿ ತಿನಿಸಿ ಶಾಲೆಗೆ ದಾಖಲಿಸಿಕೊಂಡ ಶಿಕ್ಷಕರು





» ನಮ್ಮಜನ.ಕಾಂ, ಚಿತ್ರದುರ್ಗ

2024–25 ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರಾರಂಭೋತ್ಸವ ಕಾರ್ಯಕ್ರಮ ಹಾಗೂ ದಾಖಲಾತಿ ಆಂದೋಲನವನ್ನು ಚಿತ್ರದುರ್ಗ ತಾಲೂಕಿನ ಕವಾಡಿಗರಹಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಸ್.ಜಿ. ಸೋಮಶೇಖರ್ ಹಾಗೂ ಉಪ ಕಾರ್ಯದರ್ಶಿ ತಿಮ್ಮಪ್ಪ ಅವರು ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಉಚಿತ ಪಠ್ಯಪುಸ್ತಕ ಹಾಗೂ ಶಾಲಾ ಸಮವಸ್ತ್ರವನ್ನು ನೀಡುವ ಮೂಲಕ ಗುಲಾಬಿ ಹೂಗಳನ್ನು ನೀಡಿ ವಿದ್ಯಾರ್ಥಿಗಳ ದಾಖಲಾತಿಗೆ ಚಾಲನೆ ನೀಡಲಾಯಿತು. ಈ ಕಾರ್ಯಕ್ರಮದಲ್ಲಿ 29 ವಿದ್ಯಾರ್ಥಿಗಳನ್ನು ಒಂದನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲಾಯಿತು ಎಂದು ಮುಖ್ಯ ಶಿಕ್ಷಕರು ತಿಳಿಸಿದರು. ಕವಾಡಿಗರಹಟ್ಟಿ ಜನ ವಸತಿ ಪ್ರದೇಶದಿಂದ ವಿದ್ಯಾರ್ಥಿಗಳಿಗೆ ಟೋಪಿಗಳು ಹಾಗೂ ಗುಲಾಬಿ ಹೂವನ್ನು ನೀಡಿ ಮೆರವಣಿಗೆಯ ಮೂಲಕ ಶಾಲೆಯ ಬಳಿ ಕರೆದುಕೊಂಡು ಬಂದು ಶಾಲೆಯ ಒಳಗೆ ಸಿಹಿ ವಿತರಣೆ ಮಾಡಿ ಈ ಶೈಕ್ಷಣಿಕ ವರ್ಷವನ್ನು ಪ್ರಾರಂಭಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ನಾಸಿರುದ್ದೀನ್, ಡಿವೈಪಿಸಿ ವೆಂಕಟೇಶಪ್ಪ, ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ನಾಗಭೂಷಣ್, ಕ್ಷೇತ್ರ ಸಮನ್ವಯಾಧಿಕಾರಿ ಸಂಪತ್ ಕುಮಾರ್ ಹಾಗೂ ಶಾಲಾ ಸಿಬ್ಬಂದಿ, ಪೋಷಕರು, ಎಸ್ ಡಿಎಂಸಿ ಸಿಬ್ಬಂದಿ, ಸಿಆರ್ ಪಿ ಅಜಯ್ ಕುಮಾರ್, ಶಿಕ್ಷಣ ಇಲಾಖೆ ರಾಜೀವ್ ಹಾಗೂ ರಾಜಣ್ಣ ಹಾಗೂ ಸಮಸ್ತ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ತೋರಣಗಳಿಂದ ಶೃಂಗಾರಗೊಂಡ ಶಾಲೆಯಲ್ಲಿ ಮಕ್ಕಳ ಕಲರವ




» ಮಹದೇವಪುರ ಶಿವಮೂರ್ತಿ.

ಪರಶುರಾಂಪುರ–ಎರಡು ತಿಂಗಳಿಂದ ಮಕ್ಕಳಿಲ್ಲದೇ ಬಣಗುಡುತ್ತಿದ್ದ ಶಾಲೆಗಳು ಈಗ ಪುನರಾಂಭಗೊಂಡಿವೆ. ಶುಕ್ರವಾರದಿಂದ ಮಕ್ಕಳು ಶಾಲೆಯೆಡೆಗೆ ಹೆಜ್ಜೆ ಹಾಕಿದ್ದು,ಮಕ್ಕಳ ಕಲರವದಿಂದ ಶಾಲೆಗಳಿಗೆ ಮತ್ತೆ ಜೀವ ಕಳೆಬಂದಿದೆ.

ಅಧಿಕೃತವಾಗಿ ಶಾಲೆಗಳು ಮೇ 29ರಂದು ಆರಂಭಗೊಂಡಿದ್ದರೂ ಮರುದಿನ ಭಾನುವಾರ ಇದ್ದ ಕಾರಣ ಬಹುತೇಕ ಶಾಲೆಗಳಲ್ಲಿ ಪ್ರಾರಂಭೋತ್ಸವ ಮಾತ್ರ ನಡೆದಿತ್ತು. ಮಕ್ಕಳ ಸಂಖ್ಯೆ ಕಡಿಮೆ ಇತ್ತು. ಆದರೆ 30ರಿಂದ ಶಾಲೆಗಳಿಗೆ ಮಕ್ಕಳು ಆಗಮಿಸುತ್ತಿದ್ದಾರೆ.

**ರಜೆಯ ಗುಂಗು ಬಿಟ್ಟಿಲ್ಲ :** ಮಕ್ಕಳು ಎರಡು ತಿಂಗಳ ರಜೆಯ ಮೋಜು ಸವಿದಾಗಿದೆ. ಶಾಲೆಗೆ ಹೋಗುವ ಸಂಭ್ರಮದ ಅವಧಿ ಪ್ರಾರಂಭಗೊಂಡಿದೆ. ಆದರೆ ಕೆಲ ಮಕ್ಕಳು ಇನ್ನೂ ರಜೆಯ ಗುಂಗಿನಿಂದ ಹೊರಬಂದಿಲ್ಲ.

## ಪ್ರಮುಖ ಸುದ್ದಿ

# ಪರಿಷತ್ ಚುನಾವಣೆಯಲ್ಲಿ ರಘುಮೂರ್ತಿ ಮತಯಾಚನೆ

» ಚಿತ್ರದುರ್ಗ

ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಅತ್ಯಂತ ಹೆಚ್ಚಿನ ಮತಗಳನ್ನು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಅವರಿಗೆ ನೀಡುವ ಮೂಲಕ ವಿಧಾನ ಪರಿಷತ್ ನಲ್ಲಿ ನಮ್ಮ ಬಲ ಹೆಚ್ಚಿಸಿದರೆ ಶಿಕ್ಷಕರ ಪರವಾಗಿ ಕೆಲಸ ಮಾಡಲು ಹೆಚ್ಚಿನ ಅನುಕೂಲವಾಗುತ್ತದೆ ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.

ನಗರದ ದುರ್ಗದ ಸಿರಿ ಹೋಟೆಲ್ ನಲ್ಲಿ ತುರುವನೂರು ಹೋಬಳಿಯ ಪ್ರೌಢಶಾಲಾ ಶಿಕ್ಷಕರ ಸಭೆಯಲ್ಲಿ ಡಿ.ಟಿ.ಶ್ರೀನಿವಾಸ್ ಪರ ಮತಯಾಚನೆ ಮಾಡಿ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತ ನಡೆಸುತ್ತಿದ್ದು ಶಿಕ್ಷಕರ ಪರವಾದ ತಿರ್ಮಾನಗಳನ್ನು ತೆಗೆದುಕೊಳ್ಳಲು ನಾವು ಬದ್ಧವಾಗಿದ್ದೇವೆ. ವಿಧಾನ ಸಭೆ ಜೊತೆಗೆ ವಿಧಾನ ಪರಿಷತ್ ಸಹ ನಮ್ಮ ಬಹುಮತ ಬಂದರೆ ಕಾಯ್ದೆ ಕಾನೂನು ಜಾರಿ ಮಾಡಲು ಅನುಕೂಲವಾಗುತ್ತದೆ ಎಂದರು.



ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಅವರು ಕ್ರಿಯಾಶೀಲ ವ್ಯಕ್ತಿಯಾಗಿದ್ದು ಶಿಕ್ಷಕರ ಧ್ವನಿಯಾಗಿ ಕೆಲಸ ಮಾಡುವುದರಲ್ಲಿ ಅನುಮಾನವಿಲ್ಲ, ಅವರಿಗೆ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಅನುಭವವಿದ್ದು ಶಿಕ್ಷಕರ ಪರ ವಿಧಾನ ಪರಿಷತ್ ನಲ್ಲಿ ಮಾತನಾಡಿ ಸಮಸ್ಯೆಗಳಿಗೆ ಪರಿಹಾರ ದೊರಕಿಸುವ ಕೆಲಸ ಮಾಡುತ್ತಾರೆ.

ಈ ಬಾರಿ ಅತ್ಯಧಿಕ ಮತಗಳನ್ನು ಡಿ.ಟಿ.ಶ್ರೀನಿವಾಸ್ ಆಯ್ಕೆ ಮಾಡಿದರೇ ನಮ್ಮ ಸರ್ಕಾರ ಇನ್ನೂ ಹೆಚ್ಚಿನ ಕೆಲಸಗಳನ್ನು ಮಾಡಲು ಸಹಕಾರಿಯಾಗುತ್ತದೆ.

ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಉತ್ತಮ ಆಡಳಿತ ಮೂಲಕ ಜನರಿಗೆ ಕೊಟ್ಟ ಮಾತಿನಂತೆ ಯಶಸ್ವಿಯಾಗಿ ಒಂದು ವರ್ಷ ಪೂರೈಸಿದ್ದಾರೆ. ಜನರು ನೆಮ್ಮದಿಯಿಂದ ಇದ್ದು ಬಿಜೆಪಿ ನಾಯಕರು ಮಾತ್ರ ನಿರಾಸೆಯಿಂದ ಸರ್ಕಾರದ ಮೇಲೆ ಉರುಳಿದ ಆರೋಪ ಮಾಡಿಕೊಂಡು ಕಾಲ ಕಳೆಯುತ್ತಿದ್ದು ವಿಧಾನ ಪರಿಷತ್ ಆರು ಸ್ಥಾನಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾಜಿ ಜಿ.ಪಂ.ಅಧ್ಯಕ್ಷ ರವಿಕುಮಾರ್, ಮಾಜಿ ಜಿ.ಪಂ.ಸದಸ್ಯರಾದ ಬಾಬುರೆಡ್ಡಿ, ಪ್ರಕಾಶ್ ಮೂರ್ತಿ ಮತ್ತು ಶಿಕ್ಷಕರು ಭಾಗವಹಿಸಿದ್ದರು.

# ಹದಿಹರೆಯದವರಲ್ಲಿ ತಂಬಾಕಿನ ದುಷ್ಪರಿಣಾಮ ಕುರಿತು ಜಾಗೃತಿ ಅಗತ್ಯ: ನ್ಯಾ.ಉಜ್ವಲ ವೀರಣ್ಣ ಸಿದಣ್ಣವರ್

» ಚಿತ್ರದುರ್ಗ

13 ರಿಂದ 14 ವರ್ಷದ ಹದಿಹರೆಯದ ಮಕ್ಕಳು ಕುತೂಹಲದಿಂದ ತಂಬಾಕು ಸೇವನೆ ಕಡೆ ಮುಖ ಮಾಡುತ್ತಾರೆ. ಇಂತಹ ಮಕ್ಕಳನ್ನು ಗುರುತಿಸಿ ಚಿಕತ್ಸೆ ನೀಡಿ, ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶೆ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಉಜ್ವಲ ವೀರಣ್ಣ ಸಿದಣ್ಣವರ್ ಹೇಳಿದರು.

ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಗರದ ಅಮೃತ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ, ಆಯೋಜಿಸಲಾದ ಕಾನೂನು ಅರಿವು-ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಾಮಾನ್ಯ ವ್ಯಕ್ತಿಗಳು ತಂಬಾಕು ಸೇವನೆಯಿಂದಾಗುವ ಪರಿಣಾಮಗಳನ್ನು ಹೇಳಿದರೆ ವ್ಯಸನಿಗಳು ಕೇಳುವುದಿಲ್ಲ. ವೈದ್ಯರು ಹೇಳಿದರೆ ಕೇಳುತ್ತಾರೆ. ಇಂದು ವಿದ್ಯಾರ್ಥಿಗಳಾಗಿರುವ ನೀವು ಮುಂದೆ ವೈದ್ಯರಾಗಿ ರೋಗಿಗಳ ಸೇವೆ ಮಾಡುವಿರಿ. ಈ



ಹಿನ್ನಲೆಯಲ್ಲಿ ಆರ್ಯುವೇದ ಕಾಲೇಜಿನಲ್ಲಿ ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ.

ತಂಬಾಕು, ಲಿಕ್ಕರ್, ಸಿಗರೇಟ್ ಸೇವನೆ ಮಾಡುವುದರಿಂದ ಆರೋಗ್ಯ ಮೇಲಾಗುವ ದುಷ್ಪರಿಣಾಮಗಳ ಬಗ್ಗೆ ಎಲ್ಲರಿಗೂ ತಿಳಿದಿದೆ. ಇವುಗಳ ಸೇವನೆಯಿಂದ ಆರೋಗ್ಯ ಹದಗೆಡುತ್ತದೆ. ಈ ಬಗ್ಗೆ ತಂಬಾಕು ಉತ್ಪನ್ನಗಳ ಮೇಲೆ ಚಿತ್ರಗಳ ಸಹಿತ ಬಿತ್ತರಿಸಿದರೂ, ಸೇವನೆ ಮಾಡುತ್ತಿರುವುದು ದುರಂತ.

ಚಲನಚಿತ್ರಗಳ ಪರಿಣಾಮಗಳಿಂದ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಅನೇಕ ಮಕ್ಕಳು ತಂಬಾಕು, ಗಾಂಜಾ ಸೇವನೆ ಮಾಡಿ ಕಾನೂನು ಸಂಘರ್ಷಕ್ಕೆ ಸಿಲುಕುತ್ತಾರೆ. ಇವರನ್ನು ರಕ್ಷಿಸುವುದೇ ಈ ಬಾರಿಯ ವಿಶ್ವ ತಂಬಾಕು ರಹಿತ ದಿನದ ಘೋಷ ವಾಕ್ಯವಾಗಿದೆ. ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸೋಣ ಎಂದರು. ಜಿಲ್ಲಾಸ್ಪತ್ರೆಯ ದಂತ ವೈದ್ಯಧಿಕಾರಿ ಪ್ರಸನ್ನಕುಮಾರ್ ಮಾತನಾಡಿ, ತಂಬಾಕು ಉತ್ಪನ್ನಗಳನ್ನು ಉಪಯೋಗಿಸುವುದರಿಂದ ದೈಹಿಕವಾಗಿ ಹಾಗೂ ಮಾನಸಿಕವಾಗಿ ಗಾಢವಾದ ಪರಿಣಾಮ ಬೀರುತ್ತದೆ. ತಂಬಾಕು ಸೇವನೆ ಸಾಮಾಜಿಕ ಪಿಡುಗು ಎಂದರೆ ತಪ್ಪಾಗಲಾರದು. ತಂಬಾಕು ಹಾಗೂ ಇತರೆ ಗುಟ್ಕಾ ಸೇವನೆ ಕ್ರಮೇಣ ಚಟವಾಗಿ ಮಾರ್ಪಟ್ಟು, ಕ್ಯಾನ್ಸರ್‌ನಂತಹ ಮಾರಣಾಂತಿಕ ರೋಗಗಳಿಗೆ ತುತ್ತಾಗಬಹುದು. ಆದ್ದರಿಂದ ತಂಬಾಕು ಸೇವನೆಗಳ ಬಗ್ಗೆ ಇನ್ನೂ ಹೆಚ್ಚಿನ ಅರಿವು ಹೊಂದಬೇಕು.

ಈ ದುಶ್ಚಟಗಳಿಂದ ದೂರವಾಗಿಸಲು ಪ್ರತಿ ತಾಲ್ಲೂಕು ಆಸ್ಪತ್ರಗಳಲ್ಲಿ ಹಾಗೂ ಗ್ರಾಮೀಣ ಪ್ರಾಥಮಿಕ ಆರೋಗ್ಯ ಸಮುದಾಯಗಳಲ್ಲಿ ನಿಕೋಟಿನ್ ವ್ಯಸನದಿಂದ ಮುಕ್ತರಾಗಲು ಔಷದ ನೀಡಲಾಗುತ್ತದೆ. ಇದನ್ನು ಸೇವನೆ ಮಾಡಿದರೆ ಕಾಲ ಕ್ರಮೇಣ ದುಶ್ಚಟಗಳಿಂದ ಹೊರಬರಬಹುದಾಗಿದೆ. ಜಿಲ್ಲೆಯು ತಂಬಾಕು ಉತ್ಪನ್ನಗಳ ಬಳಕೆಯಲ್ಲಿ ರಾಜ್ಯದಲ್ಲಿ 2ನೇ ಸ್ಥಾನದಲ್ಲಿದೆ ಹಾಗಾಗಿ ಇದೇ ಸಂದರ್ಭದಲ್ಲಿ ತಂಬಾಕು ಇತರೆ ಉತ್ಪನ್ನಗಳನ್ನು ಜಿಲ್ಲೆಯಲ್ಲಿ ನಿಷೇಧಿಸುವಂತೆ ನ್ಯಾಯಾಧೀಶರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಕಾರ್ಯದರ್ಶಿ ಆರ್.ಗಂಗಾಧರ್, ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ, ಜಿ ಅಮೃತ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲ ಡಾ.ಎಂ.ಎಸ್.ಪ್ರಶಾಂತ್ ಹಾಗೂ ಅಮೃತ ಆಯುರ್ವೇದಿಕ್ ಕಾಲೇಜ್ ಮತ್ತು ಆಸ್ಪತ್ರೆಯ ವಿದ್ಯಾರ್ಥಿಗಳು ಹಾಗೂ ಇತರೆ ಸಿಬ್ಬಂದಿ ಉಪಸ್ಥತರಿದ್ದರು.

# ಘನ ತ್ಯಾಜ್ಯ ನಿರ್ವಹಣೆ ಕುರಿತು ಕಾನೂನು ಅರಿವು

» ದಾವಣಗೆರೆ

ಕಟ್ಟುನಿಟ್ಟಾದ ಕಸ ಬೇರ್ಪಡಿಕೆಯನ್ನು ಜವಾಬ್ದಾರಿಯುತ ನಾಗರಿಕರಾಗಿ ನಿರ್ವಹಿಸಬೇಕಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣ ತಿಳಿಸಿದರು.

ಗುರುವಾರ(30) ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಹಾಗೂ ಮಹಾನಗರ ಪಾಲಿಕೆ, ದಾವಣಗೆರೆ ಇವರ ಸಹಯೋಗದೊಂದಿಗೆ ಪಾಲಿಕೆಯ ಸಭಾಂಗಣದಲ್ಲಿ ಸ್ವಚ್ಛ ಸರ್ವೇಕ್ಷಣೆ ಹಾಗೂ ರಾಷ್ಟ್ರೀಯ ಶುದ್ಧ ಗಾಳಿ ಕಾರ್ಯಕ್ರಮದಡಿ ಘನ ತ್ಯಾಜ್ಯ ನಿರ್ವಹಣೆಗೆ ಒತ್ತು ನೀಡುವ ಕುರಿತು ಕಾನೂನು ಅರಿವು ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣ ಉದ್ಘಾಟಿಸಿ ಮಾತನಾಡಿದರು. ಕಟ್ಟುನಿಟ್ಟಾದ ಕಸ ಬೇರ್ಪಡಿಕೆ ಬಗ್ಗೆ ಜವಾಬ್ದಾರಿ ನಾಗರಿಕರಾಗಿ ವರ್ತಿಸಬೇಕು. ಪೌರಕಾರ್ಮಿಕರ ಆರೋಗ್ಯ ವಿಮೆ ಹಾಗೂ ರಕ್ಷಣಾ ಧಿರಿಸುಗಳನ್ನು ಉಪಯೋಗಿಸಿ ತಮ್ಮ ಆರೋಗ್ಯವನ್ನು ಕಾಪಡಿಕೊಳ್ಳಬೇಕು ಎಂದು ತಿಳಿಸಿದರು.

ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರರನ್ನು ಗುರುತಿಸಿ ಪ್ರೋತ್ಸಾಹಿಸಲು ಹಾಗೂ ಗ್ರಾಮ ಮತ್ತು ಸ್ಥಳೀಯ ಮಟ್ಟದಲ್ಲಿ ಜಾಗೃತಿ ಮೂಡಿಸಬೇಕು. ವಾರ್ಡ್ ಮಟ್ಟದಲ್ಲಿ



ಕಸ ವಿಂಗಡಣೆ, ಪ್ಲಾಸ್ಟಿಕ್ ತ್ಯಾಜ್ಯದ ಶೇಖರಣೆ ಹಾಗೂ ಕಾನೂನಾತ್ಮಕ ವಿಲೇವಾರಿಯ ಬಗ್ಗೆ ವಾರ್ಡ್ ಮಟ್ಟದಲ್ಲಿನ ಉತ್ತಮ ಅಭ್ಯಾಸಗಳನ್ನು ಗುರುತಿಸಿ, ಪ್ರೋತ್ಸಾಹಿಸುವುದರ ಉಪಕ್ರಮವನ್ನು ಕಾನೂನಾತ್ಮಕವಾಗಿ ಹಾಗೂ ಪಾಲಿಕೆಯ ವತಿಯಿಂದ ಕೈಗೊಳ್ಳಲು ತಿಳಿಸಿದರು.

ಪಾಲಿಕೆಯ ಆಯುಕ್ತರಾದ ರೇಣುಕಾ ಅಧ್ಯಕ್ಷತೆ ವಹಿಸಿ ಮಾತನಾಡಿ ರಾಷ್ಟ್ರೀಯ ಶುದ್ಧ ಗಾಳಿ ಕಾರ್ಯಕ್ರಮದ ಕಾರ್ಯಯೋಜನೆ ಹಾಗೂ ಕಾಮಗಾರಿಗಳ ಕುರಿತು ಪಾಲಿಕೆಯ ಅಧಿಕಾರಿಗಳಿಗೆ ನಗರವನ್ನು ಧೂಳು ಮುಕ್ತವಾಗಿ ಪರಿವರ್ತಿಸಲು ತಿಳಿಸಿದರು. ಹಾಗೆಯೇ ಕಾರ್ಯಕ್ರಮದ ಅಡಿಯಲ್ಲಿ ಪ್ರತಿದಿನ ಉತ್ಪತ್ತಿಯಾಗುವ ಹಸಿ ಕಸ ಹಾಗೂ ಒಣ ಕಸವನ್ನು ಬೇರೆ ಬೇರೆಯಾಗಿ ವಿಂಗಡಿಸುವುದು ಹಾಗೂ ಸಸ್ಯಗಳನ್ನು ಬೆಳೆಸುವುದು, ತ್ಯಾಜ್ಯವನ್ನು ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡುವುದು ಈ ರೀತಿಯ ಕಾಮಗಾರಿಗಳ ಕುರಿತು ತಿಳಿಸಿದರು.

ಯೋಜನಾ ನಿರ್ದೇಶಕ ಎನ್.ಮಹಾಂತೇಶ್ ಮಾತನಾಡಿ ಇಂದಿನ ಯುವ ಪೀಳಿಗೆಗೆ ಘನ ತ್ಯಾಜ್ಯ ನಿರ್ವಹಣೆಯ ಅರಿವು ಅಗತ್ಯ ಹಾಗೂ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಅರಿವು ಪಡೆದುಕೊಳ್ಳಬೇಕು, ಹಸಿ ಕಸ-ಒಣ ಕಸ ಬೇರ್ಪಡಿಸಿ ನೀಡಬೇಕು ಪ್ರತಿ ದಿನ 170 ಟನ್‌ಗಿಂತ ಹೆಚ್ಚಿನ ತ್ಯಾಜ್ಯ ಉತ್ಪತ್ತಿಯಾಗುತ್ತಿದ್ದು ಈ ಬಗ್ಗೆ ಪಾಲಿಕೆಯವರು ಮತ್ತು ಸರ್ಕಾರ ನೀಡುವ ಸಲಹೆ, ಸೂಚನೆಗಳನ್ನು ಸಾರ್ವಜನಿಕರು ಪಾಲಿಸಿದರೆ ಮಾತ್ರ ತ್ಯಾಜ್ಯ ನಿರ್ವಹಣೆ ಸರಿಯಾಗಿ ನಡೆಯುತ್ತದೆ, ಇಲ್ಲವಾದರೆ ಭವಿಷ್ಯದಲ್ಲಿ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ತಿಳಿಸಿದರು.

# ಬೆಳೆವಿಮೆ, ಬೆಳೆನಷ್ಟ ಪಾವತಿಯಲ್ಲಿ ಲೋಪದೋಷ ಆರೋಪ: ರೈತ ಸಾಲ ಮನ್ನಾಕ್ಕೆ ಆಗ್ರಹ




» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಬೆಳೆವಿಮೆ ಹಾಗೂ ಬೆಳೆ ನಷ್ಟ ಪಾವತಿಗೆ ಸಂಬಂಧಪಟ್ಟಂತೆ ಸಮೀಕ್ಷೆ ಸಂದರ್ಭದಲ್ಲಿ ಕೆಲವೊಂದು ಲೋಪದೋಷಗಳಾಗಿದ್ದು, ತಾಲ್ಲೂಕಿನ ನೂರಾರು ರೈತರಿಗೆ ಬೆಳೆವಿಮೆ, ಬೆಳೆನಷ್ಟ ಹಣದ ಇದುವರೆಗೂ ದೊರಕಿಲ್ಲ. ಇದಕ್ಕೆ ಕಂದಾಯ, ಕೃಷಿ ಮತ್ತು ವಿಮಾ ಅಧಿಕಾರಿಗಳು ಕಾರಣರಾಗಿದ್ದಾರೆ. ಆದ್ದರಿಂದ ಸರ್ಕಾರ ಈ ಬಗ್ಗೆ ಪರಿಶೀಲನೆ ನಡೆಸಿ ರೈತರಿಗೆ ನ್ಯಾಯುತವಾಗಿ ದೊರೆಯಬೇಕಾದ ಹಣವನ್ನು ನೀಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ರಾಜ್ಯ ಉಪಾಧ್ಯಕ್ಷ ಉಪಾಧ್ಯಕ್ಷ ಬೇಡರೆಡ್ಡಿಹಳ್ಳಿಬಸವರೆಡ್ಡಿ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಅವರು, ಶುಕ್ರವಾರ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ರೈತ ಪದಾಧಿಕಾರಿಗಳು ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ನೀಡಿ, ಪ್ರಸ್ತುತ 2024-25ನೇ ಸಾಲಿನಲ್ಲಿ ಬೆಳೆವಿಮೆ ರೈತರಿಗೆ ಹೆಚ್ಚು ಅನುಕೂಲವಾಗುವಂತೆ ಕೆಲವೊಂದಿ ಮಾನದಂಡ ಅನುಸರಿಸುವಂತೆ ಮನವಿ ಮಾಡಿದ್ದಾರೆ.

## ಪ್ರಮುಖ ಸುದ್ದಿ

# ನರೇಗಾ ಕೂಲಿಗಾರರ ಆರೋಗ್ಯ ವಿಚಾರಿಸಿದ ಜಿ.ಪಂ ಸಿಇಒ

» ಚಿತ್ರದುರ್ಗ

ಮೊಳಕಾಲ್ಮುರು ತಾಲ್ಲೂಕು ತಮ್ಮೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೊಮ್ಮದೇವರಹಳ್ಳಿ ಕೆರೆ ಅಂಗಳದಲ್ಲಿ ಹೂಳು ತೆಗೆಯುವ ಕಾಮಕಾರಿ ಮತ್ತು ಕೋನಮರ ಗ್ರಾಮದ ಸರ್ಕಾರಿ ಹಳ್ಳ ಹೂಳು ತೆಗೆಯುವ ಕಾಮಗಾರಿ ಹಾಗೂ ರಾಂಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಂಡೇರಹಳ್ಳದಲ್ಲಿ ಹೂಳು ತೆಗೆಯುವ ಚಾಲನೆಯಲ್ಲಿರುವ ಕಾಮಗಾರಿ ಸ್ಥಳಕ್ಕೆ ಜಿ.ಪಂ. ಸಿಇಒ ಎಸ್.ಜೆ.ಸೋಮಶೇಖರ್ ಅವರು ಭೇಟಿ ನೀಡಿ ಹೂಳು ತೆಗೆಯುತ್ತಿದ್ದ ಕೂಲಿಗಾರರೊಂದಿಗೆ ಚರ್ಚಿಸಿದರು.

ಜಾಬ್‌ಕಾರ್ಡ್ ಹೊಂದಿರುವ ಕೂಲಿಗಾರರಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಒಂದು ಆರ್ಥಿಕ ವರ್ಷಕ್ಕೆ 100 ಉದ್ಯೋಗ ಕೊಡುವುದು ನಮ್ಮ ಜವಾಬ್ದಾರಿ ಯಾರು ಗುಳೆ ಹೊಗದೇ ತಮ್ಮ ತಮ್ಮ ಗ್ರಾಮಗಳಲ್ಲಿರುವ ಕೆರೆ, ಕಾಲುವೆ, ಗೋಕಟ್ಟೆ ಮತ್ತು ಚೆಕ್ ಡ್ಯಾಂ ಹೂಳು ತೆಗೆಯಬಹುದು. ಮಹಿಳೆಯರು ಮತ್ತು ಪುರುಷರು ಕೂಲಿಕೆಲಸ ಮಾಡಿ ದಿನಕ್ಕೆ ರೂ.349/- ಗಳಿಸಿ, ಇಬ್ಬರಿಗೂ ಸಮಾನ ಕೂಲಿ ಇರುವುದರಿಂದ ಗ್ರಾಮೀಣ ಕುಟುಂಬಗಳು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಮತ್ತು ಮಹಿಳೆಯರು ಹೆಚ್ಚಿನ ಸ್ವಾವಲಂಬನೆಯಿಂದ ಬದುಕಲು ಈ ಯೋಜನೆ ತುಂಬಾ ಸಹಕಾರಿಯಾಗಿದೆ. ಆದ್ದರಿಂದ ಮಹಿಳಾ ನರೇಗಾ ಕೂಲಿಗಾರರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ಕೂಲಿಗಾರರು ಸ್ವಂತ ಜಮೀನು ಹೊಂದಿದ್ದರೆ ಅಲ್ಲಿಯೂ ಕೂಡ ನರೇಗಾ ಯೋಜನೆಯಡಿ ಕೆಲಸ ಮಾಡಿಕೊಳ್ಳಬಹುದು. ಕೂಲಿಗಾರರ





ಕುಟುಂಬದಲ್ಲಿ ಮೂರು ವರ್ಷದೊಳಗಿನ ಮಕ್ಕಳಿದ್ದಲ್ಲಿ ಅವರ ಹಾರೈಕೆಗಾಗಿ "ಕೂಸಿನ ಮನೆ" ಯನ್ನು ನಿಮ್ಮ ಹತ್ತಿರದ ಗ್ರಾಮ ಪಂಚಾಯಿತಿಯಲ್ಲಿ ತೆರೆಯಲಾಗಿದ್ದು, ಮಕ್ಕಳನ್ನು ಅಲ್ಲಿ ಬಿಟ್ಟು ನಿರ್ಭಿತಿಯಿಂದ ಕೆಲಸ ಮಾಡಬಹುದಾಗಿದೆ. ಕೂಸಿನ ಮನೆಯಲ್ಲಿ ತರಬೇತಿ ಪಡೆದ ಮಹಿಳಾ ಕೇರ್ ಟೇಕರ್ಸ್ ಅವರು ಮಕ್ಕಳನ್ನು ತಾಯಿಯಂತೆ ನೋಡಿಕೊಳ್ಳುತ್ತಾರೆ. ಕೆಲಸ ಮುಗಿದ ಮೇಲೆ ಮಕ್ಕಳನ್ನು ಮನೆಗೆ ಕರೆದುಕೊಂಡು ಹೋಗಬಹುದು ಎಂದು ತಿಳಿಸಿದರು.

ಕೂಲಿಗಾರರ ಕುಂದು ಕೊರತೆಗಳಿಗೆ ಪ್ರತಿ ತಿಂಗಳು ಅಥವಾ 15 ದಿನಕ್ಕೊಮ್ಮೆ ನಡೆಯುವ "ರೋಜ್‌ಗಾರ್" ಸಭೆಯಲ್ಲಿ ಭಾಗವಹಿಸಿ, ಸಮಸ್ಯೆಗಳನ್ನು ಹೇಳಿ ಬಗೆಹರಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದ ಅವರು, ಅಲ್ಲೇ ಕೆಲಸ ಮಾಡುತ್ತಿದ್ದ ಮಹಿಳಾ ಕೂಲಿಗಾರರಿಗೆ ತಮ್ಮ ತಮ್ಮ ಖಾತೆಗಳಿಗೆ ಸರಿಯಾದ ಸಮಯಕ್ಕೆ ಕೂಲಿ ಹಣ ಬೀಳುತ್ತಿದೆಯಾ, ಪಿಡಿಒ ಅವರು ಸರಿಯಾಗಿ ಕೆಲಸ ನೀಡುತ್ತಾರಾ ಎಂಬುದಾಗಿ ವಿಚಾರಿಸಿದರು. ನಮಗೆ ಯಾವುದೇ ತೊಂದರೆ ಇಲ್ಲ ನಮಗೆ ಸರಿಯಾಗಿ ಕೆಲಸ ಕೊಟ್ಟು, ಕೂಲಿಯನ್ನು ನಮ್ಮ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡುತ್ತಾರೆ. ನಾವು ಬೇರೆ ಕಡೆ ವಲಸೆ ಹೋಗದೇ ನಮ್ಮೂರಲ್ಲೇ ಉದ್ಯೋಗ ಖಾತ್ರಿ ಕೆಲಸ ಮಾಡ್ತಿವಿ. ಕೆರೆ-ಕಾಲುವೆಗಳನ್ನು ಹೂಳೆತ್ತುತ್ತಿವಿ ಎಂದು ತಿಳಿಸಿದರು. ಸಿಇಒ ಎಸ್.ಜೆ.ಸೋಮಶೇಖರ್ ಮಾತನಾಡಿ, ಯಾವುದೋ ಒತ್ತಡದಲ್ಲಿ ಬಿಡುವಿಲ್ಲದೇ ಕೂಲಿಗಾರರು ಕೆಲಸ ಮಾಡುತ್ತಿರುತ್ತಾರೆ. ಅವರು ತಮ್ಮ ಆರೋಗ್ಯವನ್ನು ತಪಾಸಣೆ ಮಾಡಿಸಿಕೊಳ್ಳಲಾರದಷ್ಟು ಉದಾಸೀನ ತೋರಿರುತ್ತಾರೆ. ಆದ್ದರಿಂದ ನರೇಗಾ ಯೋಜನೆಯಡಿ ಕೂಲಿಗಾರರಿಗೆ ಕೆಲಸ ಒದಗಿಸುವುದರ ಜೊತೆಗೆ ಆರೋಗ್ಯವನ್ನೂ ಕಾಪಾಡುವ ನಿಟ್ಟಿನಲ್ಲಿ ಕಾಮಗಾರಿ ಸ್ಥಳಗಳಲ್ಲಿ ಆರೋಗ್ಯ ಶಿಬಿರಗಳನ್ನು ಆಯೋಜಿಸಿ, ಅವರುಗಳಿಗೆ ಪ್ರಥಮವಾಗಿ ರಕ್ತದ ಒತ್ತಡ, ಶುಗರ್, ಮೈಯಲ್ಲಾದ ಗಾಯಗಳು ಇನ್ನಿತರೆ ಕಾಯಿಲೆಗಳ ಬಗ್ಗೆ ಪರೀಕ್ಷಿಸಲಾಗುತ್ತದೆ. ಕಾಮಗಾರಿ ಮಾಡುವ ವೇಳೆ ಗಾಯಗೊಂಡರೆ ಸ್ಥಳದಲ್ಲೇ ಪ್ರಥಮ ಚಿಕಿತ್ಸೆಯನ್ನು ನೀಡಲಾಗುತ್ತದೆ. ಇದರಿಂದ ಕೂಲಿಗಾರರಿಗೆ ಅನುಕೂಲವಾಗುತ್ತದೆ. ಹೆಚ್ಚಿನ ಚಿಕಿತ್ಸೆ ಬೇಕಾದಲ್ಲಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಆರೋಗ್ಯ ತಪಾಸಣೆಯನ್ನು ಮಾಡಿಸಿಕೊಳ್ಳಬಹುದು ಎಂಬುವುದರ ಬಗ್ಗೆ ತಿಳಿಸಿದ ಅವರು, ಇದನ್ನು ಎಲ್ಲರೂ ಸದುಪಯೋಗಪಡಿಸಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದು ಎಲ್ಲರ ಕರ್ತವ್ಯ ಎಂದು ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ, ಮೊಳಕಾಲ್ಮುರು ತಾ.ಪಂ ಇಒ ಪ್ರಕಾಶ್, ಜಿಲ್ಲಾ ಪಂಚಾಯಿತಿ ನರೇಗಾ ವಿಭಾಗದ ಎಡಿಪಿಸಿ ಮೋಹನ್, ಜಿಲ್ಲಾ ಐಇಸಿ ಸಂಯೋಜಕ ಎಂ.ಎಸ್.ರವೀಂದ್ರ ನಾಥ್, ಸಹಾಯಕ ನಿರ್ದೇಶಕ ಗಣೇಶ್, ಪಿಡಿಒ ಗುಂಡಪ್ಪ, ತಾಂತ್ರಿಕ ಸಂಯೋಜಕ ಮಂಜುನಾಥ್, ಎಂಐಎಸ್ ಸಂಯೋಜಕ ಮಧುಸೂಧನ್, ತಾಲ್ಲೂಕು ಐಇಸಿ ದೇವರಾಜ್, ತಾಂತ್ರಿಕ ಸಹಾಯಕರು, ಬಿಎಫ್‌ಟಿಜಿಕೆ ಮತ್ತು ಕಾಯಕಬಂಧುಗಳು ಇದ್ದರು.

## ಫಾಸ್ಟ್ ನ್ಯೂಸ್

### ಪರಿಷತ್ ಚುನಾವಣೆ, ಮತದಾರರಿಗೆ ರಜೆ

» ದಾವಣಗೆರೆ

ವಿಧಾನ ಪರಿಷತ್‌ನ ಆಗ್ನೆಯ ಶಿಕ್ಷಕರ ಕ್ಷೇತ್ರ ಹಾಗೂ ನೈರುತ್ಯ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಕ್ಕೆ ಜೂನ್ 3 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಮತದಾರರಾಗಿರುವ ಶಿಕ್ಷಕರಿಗೆ ಹಾಗೂ ಪದವೀಧರರಿಗೆ ಮತದಾನ ಮಾಡಲು ವಿಶೇಷ ಸಾಂದರ್ಭಿಕ ರಜೆಯನ್ನು ನೀಡಲಾಗಿರುತ್ತದೆ. ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕಚೇರಿಗಳು, ರಾಷ್ಟ್ರೀಕೃತ ಹಾಗೂ ಇತರ ಬ್ಯಾಂಕುಗಳು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಖಾನೆಗಳು ಉಳಿದ ಕೈಗಾರಿಕೆ ಸಂಸ್ಥೆಗಳು ಹಾಗೂ ಸಹಕಾರ ರಂಗದ ಸಂಘ ಸಂಸ್ಥೆಗಳಲ್ಲಿ ಎಲ್ಲಾ ವ್ಯವಹಾರಿಕ ಸಂಸ್ಥೆಗಳಲ್ಲಿ ಔದ್ಯಮಿಕ ಸಂಸ್ಥೆಗಳಲ್ಲಿ ಮತ್ತು ಇತರ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ ಪದವೀಧರರು ಹಾಗೂ ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಅಂತಹ ಅರ್ಹ ಮತದಾರರಿಗೆ ಸೀಮಿತವಾದಂತೆ ಚಲಾಯಿಸಲಿರುವ ಮತದಾರರಿಗೆ ಮತದಾನದ ದಿನವಾದ ಜೂನ್ 3 ರ ಸೋಮವಾರದಂದು ವಿಶೇಷ ಸಾಂದರ್ಭಿಕ ರಜೆ ಯನ್ನು ಮಂಜೂರು ಮಾಡಲು ಆದೇಶಿಸಲಾಗಿದೆ. ಆಧಾರ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್, ಪಾನ್‌ಕಾರ್ಡ್, ಪಾಸ್ ಪೋರ್ಟ್, ಕೇಂದ್ರ, ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳು ಅಥವಾ ಇತರ ಖಾಸಗಿ ಕೈಗಾರಿಕಾ ಮನೆಗಳಿಂದ ಅದರ ಉದ್ಯೋಗಿಗಳಿಗೆ ನೀಡಲಾದ ಸೇವಾ ಗುರುತಿನ ಕಾರ್ಡ್, ಸಂಸದರು, ಶಾಸಕರು, ಎಂಎಲ್‌ಸಿಗಳಿಗೆ ಅಧಿಕೃತ ಗುರುತಿನ ಚೀಟಿ, ಶಿಕ್ಷಣ ಸಂಸ್ಥೆಗಳಿಂದ ನೀಡಲಾದ ಸೇವಾ ಗುರುತಿನ ಕಾರ್ಡ್‌ಗಳು, ಇದರಲ್ಲಿ ಶಿಕ್ಷಕರು, ಪದವೀಧರರ ಕ್ಷೇತ್ರದ ಮತದಾರರನ್ನು ನೇಮಿಸಿಕೊಳ್ಳಬಹುದು, ವಿಶಿಷ್ಟ ಅಂಗವೈಕಲ್ಯ ಕಾರ್ಡ್(UDID) ಮೂಲಕ ಮತದಾನ ಮಾಡಬಹುದು ಎಂದು ತಿಳಿಸಿದ್ದಾರೆ.

### ವೈ. ಎ ನಾರಾಯಣಸ್ವಾಮಿ ಅವರ ಪರ ಡಾಎಂ ಚಂದ್ರಪ್ಪ ಮತಯಾಚನೆ



» ಚಿತ್ರದುರ್ಗ

ಇಂದು ಹೊಳಲ್ಕೆರೆ ಕ್ಷೇತ್ರದ ಮಲ್ಲಾಡಿಹಳ್ಳಿಯ ಪದವಿ ಪೂರ್ವ ಕಾಲೇಜ್ ಪ್ರೌಢ ಶಾಲಾ ವಿಭಾಗದಲ್ಲಿ ನಡೆದ ವಿಧಾನ ಪರಿಷತ್‌ನ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ಸಭೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ವೈ. ಎ ನಾರಾಯಣಸ್ವಾಮಿ ಅವರ ಪರ ಡಾ ಎಂ ಚಂದ್ರಪ್ಪ ಮತ ಯಾಚಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕರಾದ ರೈತ ಮೋರ್ಚಾ ಕಾರ್ಯದರ್ಶಿಯಾದ ಮಲ್ಲಿಕಾರ್ಜುನ್, ಹಾಗೂ ಕುಮಾರಣ್ಣ ರಾಮಗಿರಿ, ಪ್ರಾಂಶುಪಾಲರಾದ ಡಾ ನಾಗರಾಜ್ , ಆರ್.ಬಿ.ಹಾರೋಮಠ್, ಚಿಗಟೋರಪ್ಪ, ಉಪನ್ಯಾಸಕರು ಪ್ರಮುಖರು ಉಪಸ್ಥಿತರಿದ್ದರು.

### ಹಾಡುಹಗಲೇ ನೀಲಾದ್ರಿ ಪೋಟೋಸ್ಟುಡಿಯೋ ಬೀಗ ಮುರಿದು ಕಳ್ಳತನ

» ಚಳ್ಳಕೆರೆ

ನಗರದ ಪಾವಗಡ ರಸ್ತೆಯ ನೀಲಾದ್ರಿ ಪೋಟೋ ಸ್ಟುಡಿಯೋ ಮಾಲೀಕ ಗೋವಿಂದರಾಜು ಮಧ್ಯಾಹ್ನ ಅಂಗಡಿ ಬೀಗಹಾಕಿಕೊಂಡು ಊಟಕ್ಕೆ ಹೋದ ಸಂದರ್ಭದಲ್ಲಿ ಬೀಗ ಮುರಿದು ಒಳ ಪ್ರವೇಶಿಸಿ ಕಳ್ಳ ಬೆಲೆಬಾಳುವ ಕ್ಯಾಮರ ಹಾಗೂ ಆರು ಸಾವಿರ ನಗದು ಹಣವನ್ನು ದೋಚಿಪರಾರಿಯಾಗಿದ್ದಾನೆ. ಪಾವಗಡ ರಸ್ತೆ ಹೆಚ್ಚು ಜನ ಹಾಗೂ ವಾಹನ ಸಂಚಾರವಿರುವ ರಸ್ತೆಯಾಗಿದ್ದು, ಹಗಲುರಾತ್ರಿ ಜನಹಾಗೂ ವಾಹನ ಓಡಾಟ ನಿರಂತರವಾಗಿರುತ್ತದೆ. ಇಂತಹ ಜನನಿಬಿಡ ಪ್ರವೇಶದಲ್ಲೂ ಹಾಡುಹಗಲೇ ಕಳ್ಳತನವಾಗಿರುವುದು ಸೋಜಿಗದ ಸಂಗತಿಯಾಗಿದೆ. ಸ್ಥಳಕ್ಕೆ ಅಪರಾಧವಿಭಾಗದ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಅಂಚೆನೌಕರರ ಸಂಘದ ರಾಜ್ಯಾಧ್ಯಕ್ಷರಾಗಿ ಕರೀಕೆರೆತಿಮ್ಮಾರೆಡ್ಡಿ ಆಯ್ಕೆ

» ಚಳ್ಳಕೆರೆ

ರಾಷ್ಟ್ರೀಯ ಅಂಚೆ ನೌಕರರ ಸಂಘದ ರಾಷ್ಟ್ರೀಯ ಕಾರ್ಯದರ್ಶಿ ಮುರುಳೀಧರನ್ ಕರ್ನಾಟಕ ರಾಜ್ಯ ರಾಷ್ಟ್ರೀಯ ಅಂಚೆ ನೌಕರರ ಸಂಘದ ರಾಜ್ಯಾಧ್ಯಕ್ಷರನ್ನಾಗಿ ಕರೀಕೆರೆ ತಿಮ್ಮಾರೆಡ್ಡಿಯವರನ್ನು ಸರ್ವಾನುಮತದಿಂದ ಆಯ್ಕೆ ಮಾಡಿ ಆದೇಶ ಹೊರಡಿಸಿದ್ದಾರೆ. ಈ ಸಂದರ್ಭದಲ್ಲಿ ವಲಯ ಕಾರ್ಯದರ್ಶಿ ಚಿತ್ರಸೇನಾ, ವಿಭಾಗೀಯ ಕಾರ್ಯದರ್ಶಿ ಜಿ.ಕೆ.ಪಾಂಡುರಂಗರೆಡ್ಡಿ, ಕೋನಸಾಗರ ಎಸ್.ಮಹೇಶ್, ಸಣ್ಣಬೋರಣ್ಣ, ಮೈಲನಹಳ್ಳಿ ನಾಗರಾಜು ಮುಂತಾದವರು ತಿಮ್ಮಾರೆಡ್ಡಿ ಆಯ್ಕೆಗೆ ಸಂತಸ ವ್ಯಕ್ತಪಡಿಸಿದ್ದಾರೆ.

# ಮಾನವಾಭಿವೃದ್ಧಿಗೆ ಕಂಟಕವಾಗಿರುವ ತಂಬಾಕು ಸೇವನೆ ಇಲ್ಲವಾಗಿಸಿವುದು ಇಂದಿನ ಅತ್ಯಗತ್ಯ

» **ದಾವಣಗೆರೆ**



ಮಾನವಾಭಿವೃದ್ಧಿಗೆ ಕಂಟಕವಾಗಿರುವ ತಂಬಾಕು ಸೇವನೆಯ ಪಿಡುಗನ್ನು ಸಂಪೂರ್ಣವಾಗಿ ಇಲ್ಲವಾಗಿಸಿವುದು ಇಂದಿನ ಅತ್ಯಗತ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜ್ವೇಶ್ವರಿ ಎನ್. ಹೆಗಡೆ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ಚಿಗಟೇರಿ ಜಿಲ್ಲಾ ಆಸ್ಪತ್ರೆ, ಜಿಲ್ಲಾ ಸರ್ವೇಕ್ಷಣ ಅಧಿಕಾರಿಗಳ ಕಚೇರಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಜಿಲ್ಲಾ ವಕೀಲರ ಸಂಘ, ಅಶ್ವಿನಿ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಪಿಜಿ ಸೆಂಟರ್ ಹಾಗೂ ವಿ.ಎಸ್ ಪ್ಯಾರಾಮೆಡಿಕಲ್ ಕಾಲೇಜ್, ದಾವಣಗೆರೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಆಯೋಜಿಸಲಾದ ವಿಶ್ವ ತಂಬಾಕು ರಹಿತ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶ್ವ ಆರೋಗ್ಯ ಸಂಸ್ಥೆಯು 1987 ರಿಂದ ಮೇ-31ನ್ನು "ವಿಶ್ವ ತಂಬಾಕು ರಹಿತ ದಿನ"ವನ್ನಾಗಿ ವಿಶ್ವದಾದ್ಯಂತ ಆಚರಿಸಲಾಗುತ್ತಿದೆ. ಪ್ರತಿ ಒಂದೊಂದು ಘೋಷಣಾ ವಾಕ್ಯದೊಂದಿಗೆ ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು, ಸಾವು-ನೋವುಗಳು, ವಿವಿಧ ಅಸಾಂಕ್ರಾಮಿಕ ಕಾಯಿಲೆಗಳಿಗೆ ತುತ್ತಾಗುವುದರ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಜನರ ಗಮನ ಸೆಳೆಯುವ ನಿಟ್ಟಿನಲ್ಲಿ ಈ ದಿನವನ್ನು ಆಚರಿಸಲಾಗುತ್ತಿದೆ.

ತಂಬಾಕು ಪ್ರತಿ ವರ್ಷ ವಿಶ್ವದಾದ್ಯಂತ 8 ಮಿಲಿಯನ್ ಜೀವಗಳನ್ನ ತೆಗೆದುಕೊಳ್ಳುತ್ತಿದೆ, ಅದೇ ರೀತಿ ತಂಬಾಕು ಉದ್ಯಮವು ಹೊಸದಾಗಿ 8 ಮಿಲಿಯನ್ ಬಳಕೆದಾರರನ್ನು ಹುಡುಕುತ್ತಿದೆ. ಸುಮಾರು 15000 ಕ್ಕೂ ಹೆಚ್ಚು ಸುವಾಸನೆ ಭರಿತ ಉತ್ಪನ್ನಗಳನ್ನು ತಯಾರಿಸಿ ಮಕ್ಕಳನ್ನು ಆಕರ್ಷಿತಗೊಳಿಸುವುದಾಗಿದೆ. ತಂಬಾಕು ಕಂಪನಿಯವರು ಸಾಮಾಜಿಕ ಮಾಧ್ಯಮ ಹಾಗೂ ಮಾರ್ಕೆಟಿಂಗ್ ಮುಖಾಂತರ ಮಕ್ಕಳನ್ನು ಪ್ರೇರೇಪಿಸುವುದು. ನಗರ ಪ್ರದೇಶಗಳಲ್ಲಿ ಯುವಕರಿಗೆ ಉಚಿತವಾಗಿ ತಂಬಾಕು ಉತ್ಪನ್ನಗಳನ್ನು ನೀಡಿ ದಾಸರನ್ನಾಗಿ ಮಾಡುವುದು ಶಾಲೆ, ಕಾಲೇಜುಗಳ ಬಳಿಯಲ್ಲಿ ಹೆಚ್ಚಿನದಾಗಿ ಪ್ರಚಾರ ನೀಡಿ ಮಕ್ಕಳನ್ನು ಆಕರ್ಷಿಸುವುದು. ತಂಬಾಕು ಉದ್ಯಮವು ಯುವಕರಲ್ಲಿ ಹಸ್ತಕ್ಷೇಪ ತೋರಿಸುವ ಮುನ್ನ ಜಾಗೃತರಾಗಿ, ಯುವ ಜನಾಂಗಕ್ಕೆ, ತಂದೆ ತಾಯಂದಿರಲ್ಲಿ, ಸಾರ್ವಜನಿಕರಲ್ಲಿ ಹಾಗೂ ಸಂಘ ಸಂಸ್ಥೆಗಳಲ್ಲಿ ಇದರ ಬಗ್ಗೆ ಅರಿವು ಮೂಡಿಸಿ ತಂಬಾಕು ಮುಕ್ತ ಯುವ ಪೀಳಿಗೆಯನ್ನಾಗಿಸುವುದು ವಿಶ್ವ ತಂಬಾಕು ರಹಿತ ದಿನಾಚರಣೆಯ ಉದ್ದೇಶವಾಗಿದೆ ಎಂದರು ತಿಳಿಸಿದರು.

ಈ ವರ್ಷ "ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು" ಎಂಬ ಘೋಷವಾಕ್ಯದಡಿ ಆಚರಿಸಲಾಗುತ್ತಿದೆ. ಕರ್ನಾಟಕದಲ್ಲಿ ಪ್ರತಿ ನಿತ್ಯ 293 ಮಕ್ಕಳು 13 ರಿಂದ 15 ರ ವಯೋಮಾನದವರು ಹೊಸದಾಗಿ ತಂಬಾಕು ಸೇವನೆಗೆ ದಾಸರಾಗುತ್ತಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆಯ 2022 ರ ' ವರದಿಯ ಪ್ರಕಾರ ವಿಶ್ವದಾದ್ಯಂತ 37 ಮಿಲಿಯನ್ ಮಕ್ಕಳು ಯಾವುದಾದರೂ ಒಂದು ರೀತಿಯ ತಂಬಾಕು ಉತ್ಪನ್ನಗಳನ್ನು ಬಳಸುತ್ತಿದ್ದಾರೆ. ಇದೇ ರೀತಿ ಮುಂದುವರೆದಲ್ಲಿ ಕ್ಯಾನ್ಸರ್ ನಂತಹ ಭಯಾನಕ ಕಾಯಿಲೆಗೆ ತುತ್ತಾಗಿ ನಮ್ಮ ಯುವ ಸಮೂಹವೇ ಬಲಿಯಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಆದ್ದರಿಂದ ಇನ್ನು ಹೆಚ್ಚಿನ ಮಟ್ಟದಲ್ಲಿ ತಂಬಾಕು ಉತ್ಪನ್ನಗಳ ಜಾಗೃತಿ ಕಾರ್ಯಕ್ರಮಗಳಿಗೆ ನಾವೆಲ್ಲರು ಕೈಜೋಡಿಸೋಣ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಮಹಾವೀರ್ ಮ. ಕರೆಣ್ಣ ಅವರು ಭಿತ್ತಿ ಪತ್ರ ಬಿಡುಗಡೆ ಮಾಡಿ ಮಾತನಾಡಿ ತಾತ್ಕಾಲಿಕವಾಗಿ ಸಿಗುವ ಸಂತೋಷ, ಮೋಜು, ಮಸ್ತಿ ಸಿಗುವ ಕಾರಣಕ್ಕೆ ಯುವ ಪೀಳಿಗೆಗಳು ತಂಬಾಕಿಗೆ ದಾಸರಾಗುತ್ತಿದ್ದಾರೆ. ತಂಬಾಕು ಉತ್ಪನ್ನಗಳ ಸೇವನೆಯು ಆರೋಗ್ಯಕ್ಕೆ ಹಾನಿಕಾರಕವಾಗಿದ್ದು, ಯುವಜನರು ತಂಬಾಕಿನಿಂದ ದೂರ ಇರಬೇಕು. ಕೆಡುಕಿಗೆ ಆಕರ್ಷಣೆ ಹೆಚ್ಚು. ಬೀಡಿ, ಸಿಗರೇಟು ಸೇರಿದಂತೆ ತಂಬಾಕನ್ನು ಬೇರೆ ಬೇರೆ ರೂಪಗಳಲ್ಲಿ ಸೇವಿಸುವುದು ಆರೋಗ್ಯಕ್ಕೆ ಹಾನಿಕರ, ಇದು ಕೇವಲ ಜೀವನವಷ್ಟೆ ಅಲ್ಲದೆ ಆರ್ಥಿಕ ನಷ್ಟವನ್ನೂ ತರುತ್ತದೆ. ಆದ್ದರಿಂದ ತಂಬಾಕಿನಿಂದ ದೂರವಿದ್ದು ನಮ್ಮ ದೇಹದ ಶ್ವಾಸಕೋಶ ಕಾಪಡುವಲ್ಲಿ ನಾವೆಲ್ಲರು ಶ್ರಮಿಸೋಣ ಎಂದು ತಿಳಿಸಿದರು.ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಅಪರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ನೋಡಲ್ ಅಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್. ಬಳ್ಳಾರಿ, ಜಿಲ್ಲಾ ಆರೋಗ್ಯ ಮತ್ತು ಕು.ಕ. ಅಧಿಕಾರಿ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸದಸ್ಯ ಕಾರ್ಯದರ್ಶಿ ಡಾ.ಷಣ್ಮುಖಪ್ಪ.ಎಸ್, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ನಾಗೇಂದ್ರಪ್ಪ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್, ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮದ ಕಾರ್ಯಕ್ರಮಾಧಿಕಾರಿ ಡಾ.ತಿಪ್ಪೇಸ್ವಾಮಿ, ಪಾಲಿಕೆ ಆರೋಗ್ಯಾಧಿಕಾರಿ ಡಾ.ಚಂದ್ರಮೋಹನ್.ಡಿ.ಎಂ, ಅಶ್ವಿನಿ ಆಯುರ್ವೇದ ಮೆಡಿಕಲ್ ಕಾಲೇಜಿನ ಅಧ್ಯಕ್ಷರಾದ ಡಾ.ಮೃತ್ಯುಂಜಯ ಎನ್ ಹಿರೇಮಠ, ಪ್ರಾಚಾರ್ಯರಾದ ಡಾ.ಜ್ಞಾನೇಶ್ವರ್. ಎಲ್.ಎಂ, ವಿ.ಎಸ್.ಪ್ಯಾರಾಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಶ್ವೇತಾ ರಘುನಾಥ್, ವೈದ್ಯಕೀಯ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಜಿ.ಡಿ.ರಾಘವನ್ ಪ್ರಾಸ್ತಾವಿಕ ನುಡಿಗಳನ್ನಾಡಿದರು.

## ದಾಖಲಾತಿ ಅಂದೋಲನದ ಮೂಲಕ ವಿದ್ಯಾರ್ಥಿಗಳ ಸೇರ್ಪಡೆ: ಕೆ.ಎಸ್.ಸುರೇಶ್

» **ಚಳ್ಳಕೆರೆ**

ತಾಲ್ಲೂಕಿನದೊಡ್ಡೇರಿಗ್ರಾಮಪಂಚಾಯಿತಿವ್ಯಾಪ್ತಿಯಕೆಂಚವೀರನಹಳ್ಳಿಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆರಂಭವಾಗಿದ್ದು, ವಿದ್ಯಾರ್ಥಿಗಳನ್ನು ಅಲಂಕೃತ ಎತ್ತಿನ ಗಾಡಿಯಲ್ಲಿ ಶಾಲೆಗೆ ಕರೆತರಲಾಯಿತಲ್ಲದೆ, ಇಡೀ ಗ್ರಾಮದಲ್ಲಿ ಮಕ್ಕಳನ್ನು ಶಾಲೆಗೆ ಸೇರ್ಪಡೆ ಮಾಡುವಂತೆ ವಿನಂತಿಸಿ ದಾಖಲಾತಿ ಅಂದೋಲ ನಡೆಸಲಾಯಿತು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಇಂದು ತಾಲ್ಲೂಕಿನಾದ್ಯಂತ ಏಕಕಾಲಕ್ಕೆ ಶಾಲೆಗಳು ಆರಂಭವಾಗಿವೆ. ಪ್ರಸ್ತುತ ಶೈಕ್ಷಣಿ ವರ್ಷ ಆರಂಭವಾಗಿದ್ದು ಎಲ್ಲೆಡೆ ಉತ್ತಮ ವಾತಾವರಣವಿದೆ. ವಿಶೇಷವೆಂದರೆ ಶಾಲೆಗಳ ಆರಂಭಕ್ಕೆ ಇಡೀ ಗ್ರಾಮಸ್ಥರೇ ಉತ್ಸಾಹದಿಂದ ಇಲ್ಲಿಗೆ ಆಗಮಿಸಿದ್ದಾರೆ. ಗ್ರಾಮದ ರಸ್ತೆಗಳಲ್ಲಿ ಮೆರವಣಿಗೆ ನಡೆಸಲಾಗಿದೆ. ಇಡೀ ಗ್ರಾಮವೇ ಇಂದು ಶಾಲೆಗಳ ಪುನರಾಂಭಕ್ಕೆ ಹರ್ಷ ವ್ಯಕ್ತಪಡಿಸಿವೆ. ಶಾಲೆಯನ್ನು ತಳಿರುತೋರಣ, ರಂಗೋಲಿಗಳಿಂದ ಸಿಂಗರಿಸಲಾಗಿದೆ. ಅಲಂಕೃತ ಎತ್ತಿನ ಗಾಡಿಯಲ್ಲಿ ಮಕ್ಕಳು ಆಗಮಿಸಿದ್ದಾರೆ. ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ಆರಂಭದ ದಿನವನ್ನು ಸದಾನೆನಪಿನಲ್ಲಿಟ್ಟುಕೊಳ್ಳುವಂತೆ ಮಾಡಲಾಗಿದೆ ಎಂದರು.



ಫಾಸ್ಟ್ ನ್ಯೂಸ್

### ವಯೋ ನಿವೃತ್ತಿ ಬೀಳ್ಕೊಡುಗೆ ಸಮಾರಂಭ.



» **ಪರಶುರಾಂಪುರ**

ಗ್ರಾಮದ ಕೆಪಿಎಸ್ ಶಾಲೆಯ ಪ್ರೌಢಶಾಲೆಯಲ್ಲಿ ಸುಮಾರು ಹದಿನೈದು ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದ ಹೆಚ್.ತುಂಗಭದ್ರಪ್ಪ ಅವರಿಗೆ ಶಾಲೆಯ ಸಿಬ್ಬಂದಿ ಗುರುವಾರ ಆತ್ಮೀಯ ಬೀಳ್ಕೊಡುಗೆ ನೀಡಿದರು. ಸಮಾರಂಭದ ಅಧ್ಯಕ್ಷತೆವಹಿಸಿ ಮಾತನಾಡಿದ ಪ್ರಾಂಶುಪಾಲ ನಾಗರಾಜ 'ಮುಖ್ಯ ಶಿಕ್ಷಕರು ಶಾಲೆಗೆ ಅವಿಸ್ಮರಣೀಯ ಸೇವೆ ಸಲ್ಲಿಸಿದ್ದಾರೆ.ಶಿಕ್ಷಕ ವೃತ್ತಿ ಮಾಡುವುದು ಭಾಗ್ಯವಂತರ ಕೆಲಸವಾಗಿದ್ದು, ಶ್ರೇಷ್ಠ ಸೇವೆ. ಮಕ್ಕಳ ಭವಿಷ್ಯ ರೂಪಿಸಿದ ಅವರ ವಿಶ್ರಾಂತ ಜೀವನ ಸುಖಮಯವಾಗಿರಲಿ ಎಂದರು. ಗ್ರಾಪಂ ಸದಸ್ಯ ನಾಗಭೂಷಣ ಮಾತನಾಡಿ, ಶಿಕ್ಷಕ ಹುದ್ದೆ ಇದೊಂದು ಸಾಮಾಜಿಕ ಬದಲಾವಣೆ ತರುವಂತಹ ಹುದ್ದೆಯಾಗಿದೆ. ಈ ಸೇವೆ ಸಿಗುವುದು ತುಂಬಾ ಅದೃಷ್ಟವಂತರಿಗೆ, ಕಠಿಣ ಪರಿಶ್ರಮಿಗಳಿಗೆ ಮತ್ತು ನಿರಂತರ ಪ್ರಯತ್ನಗಳನ್ನು ಮಾಡುತ್ತಲೇ ನಮ್ಮ ಜೀವನ ಕಟ್ಟಿಕೊಳ್ಳುವ ವ್ಯಕ್ತಿಗಳಿಗೆ ಒಲಿದಿದೆ. ಆ ಕಾರಣದಿಂದಾಗಿ ವಿದ್ಯಾರ್ಥಿಗಳಿಗೆ ಪ್ರತಿ ಕ್ಷಣವೂ ಕಲಿಸುವ ತಹತಹ ಇಮ್ಮಡಿಗೊಳಿಸಿಕೊಳ್ಳಬೇಕು ಎಂದರು. ಸಂಧರ್ಭದಲ್ಲಿ ಹಲವು ಶಿಕ್ಷಕರು ಅಭಿಪ್ರಾಯಯನ್ನ ಹಂಚಿಕೊಂಡರು.ಸನ್ಮಾನ ಸ್ವೀಕರಿಸಿ ಮಾತನಾಡಿದ ಉಪ ಪ್ರಾಂಶುಪಾಲ ಹೆಚ್. ತುಂಗಭದ್ರಪ್ಪ ಶಿಕ್ಷಕ ಸಮುದಾಯದವರು ಎಲ್ಲ ಕ್ಷೇತ್ರಗಳನ್ನು ಬೆಳೆಸುವಂತಹ ಗಾರುಡಿಗರು ಆಗಾಗಿ ಪವಿತ್ರವಾದ ಹುದ್ದೆಗೆ ಗೌರವ ನೀಡವಂತರಾಗಿ ಎಂದು ಕಿವಿ ಮಾತು ಹೇಳಿದರು. ಈ ವೇಳೆಯಲ್ಲಿ ಗ್ರಾಪಂ ಅಧ್ಯಕ್ಷ ಜಗಲೂರು ಸ್ವಾಮಿ, ಸದಸ್ಯ ನಾಗಭೂಷಣ, ಪ್ರಾಚಾರ್ಯ ನಾಗರಾಜ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ರಂಗಸ್ವಾಮಿ, ಸೇರಿದಂತೆ ಮುಖ್ಯ ಶಿಕ್ಷಕರಾದ ಭೂತಮ್ಮ, ಮಂಜುನಾಥ ಹಾಗೂ ಶಾಲಾ-ಕಾಲೇಜಿನ ಸಿಬ್ಬಂದಿ ಜತೆ ಬಿಸಿಯೂಟದ ಸಹಾಯಕರು ಉಪಸ್ಥಿತರಿದ್ದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T